OS No. 92/2023

PW-1

**(ಇಂದು ದಿಃ 07-02-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು)**

**<u>ಮುಂದುವರೆದ ಮುಖ್ಯ ವಿಚಾರಣೆಃ- ವಾದಿ ಪರ ಶ್ರೀ.RG ವಕೀಲರಿಂದಃ-</u>**

ಈ ದಿನ ನಾನು ನನ್ನ ಮುಖ್ಯ ವಿಚಾರಣೆಯಾಗಿ ಪ್ರತಿಜ್ಞಾ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ನನ್ನ ತಿಳುವಳಿಕೆಯ ಮೇರೆಗೆ ಬರೆಯಲ್ಪಟ್ಟಿರುತ್ತವೆ ಮತ್ತು ಅವು ಸತ್ಯವಾಗಿರುತ್ತವೆ. ಪ್ರತಿಜ್ಞಾ ಪತ್ರಕ್ಕೆ ಸಹಿ ಮಾಡಿರುತ್ತೇನೆ.

- 4 ಕಂಪ್ಯೂಟರ ಪಹಣಿಗಳನ್ನು ನಿಪಿ-1 ರಿಂದ 4 ಎಂದು ಗುರುತಿಸಲಾಯಿತು.
- ದಿಃ 29-07-1978 ರ ನೋಂದಣಿ ಇಲ್ಲದ ಖರೀದಿ ಪತ್ರದ ಮೂಲ ಪ್ರತಿಯನ್ನು ಹಾಜರುಪಡಿಸಿದ್ದೇನೆ. ಸದರಿ ದಾಖಲಾತಿಯನ್ನು ನಿಷಾನೆಯಾಗಿ ಗುರುತಿಸಿಕೊಳ್ಳಲು ಶ್ರೀ. ಬಿ. ಎಸ್. ಎಸ್. ವಕೀಲರು ತಕರಾರು ಎತ್ತಿ ಸದರಿ ದಾಖಲಾತಿ ನೋಂದಣಿ ಆಗಿಲ್ಲ ಮತ್ತು ನಿಗದಿತ ಮುದ್ರಾಂಕ ಶುಲ್ಕ ಪಾವತಿ ಮಾಡಿಲ್ಲ ಎಂದು ಹೇಳಿರುತ್ತಾರೆ. ಆಗ ವಾದಿ ಪರ ವಕೀಲರು ಸದರಿ ದಾಖಲಾತಿಯ ಮೇಲೆ ನಿಗದಿ ಪಡಿಸಿದ ಮುದ್ರಾಂಕ ಶುಲ್ಕ ಮತ್ತು ದಂಡ ಪಾವತಿಸಲು ವಾದಿ ಸಿದ್ದರಿರುವುದಾಗಿ ಹೇಳುತ್ತಾರೆ. ಕಾರಣ ಮುದ್ರಾಂಕ ಶುಲ್ಕ ಮತ್ತು ದಂಡ ನಿರ್ಧರಿಸುವ ಸಲುವಾಗಿ ಪ್ರಕರಣವನ್ನು ಮುಂದೂಡಲಾಯಿತು.

**(ಮುಂದೂರವರೆ ಮುಖ್ಯ ವಿಚಾರಣೆಗೆ ಮುಂದೂಡಲಾಯಿತು)**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳ್ಚು ಮಾಡಿಸಲಾಯಿತು)

**ಓ.ಹೇ.ಕೇ. ಸರಿ ಇದೆ.**

**ಹಿರಿಯ ಸಿವಿಲ್ ನ್ಯಾಯಾಧೀಶರು,**
**ಸೇಡಂ.**